ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಹೌದು.

ಆ) ಅಂದಾಜು ವೆಚ್ಚ ರೂ. 44.55 ಲಕ್ಷಗಳು. ಕೇಂದ್ರ ಸರ್ಕಾರದಿಂದ ರೂ. 18.00 ಲಕ್ಷ ನಿರೀಕ್ಷಿಸಿದ್ದು, ಜಿಲ್ಲಾ ಪಂಚಾಯತ್‌ನಿಂದ ರೂ. 10.00 ಲಕ್ಷ ಹಾಗೂ ಉಳಿದ ಹಣವನ್ನು ಲೋಕಸಭಾ, ವಿಧಾನಸಭಾ ಹಾಗೂ ವಿಧಾನ ಪರಿಷತ್ ಸದಸ್ಯರುಗಳ ಅನುದಾನದಲ್ಲಿ ಹಾಗೂ ಸಾರ್ವಜನಿಕ ವಂತಿಕೆ ಮೂಲಕ ಸಂಗ್ರಹಿಸಲಾಗುವುದು.

ಇ) ಹೌದು.

ವಿಳಂಬ ಪ್ರಕರಣಗಳು ವರದಿಯಾಗಿಲ್ಲ.

ಈ) ಅನುಕೂಲ ಮಾಡಿಕೊಡಲಾಗುತ್ತಿದೆ.

ಚಿಂತಾಮಣಿ ಕ್ಷೇತ್ರದಲ್ಲಿ ಶಿಥಿಲಗೊಂಡಿರುವ ಹೆದ್ದಾರಿ ದುರಸ್ತಿಗೊಂಡಿರುವ ಹೆದ್ದಾರಿ ದುರಸ್ತಿಗೊಳಿಸುವುದು

625 (297) ಶ್ರೀ ಚೌಡರೆಡ್ಡಿ (ಚಿಂತಾಮಣಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೀಳೂರು ಹೋಬಳಿ ಚಾಕ್‌ವೇಲ್ ಗ್ರಾಮದಿಂದ ರಾಶ್ಚೆರುವುವರೆಗೆ ಹೆದ್ದಾರಿ ರಸ್ತೆಯು ಬಹಳ ಶಿಥಿಲಗೊಂಡು ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರವು ಈ ರಸ್ತೆ ದುರಸ್ತಿ ಮಾಡಿ ಡಾಂಬರೀಕರಣ ಮಾಡಲು ಯಾವ ಕ್ರಮ ಕೈಗೊಳ್ಳುತ್ತದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಮರಳಿನ ಸಾಗಾಣಿಕೆಯ ಭಾರಿ ವಾಹನಗಳ ಸಂಚಾರದಿಂದ ಈ ರಸ್ತೆಯು ಹಾನಿಗೊಳ್ಳುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆ.

ಆ) ಈ ಜಿಲ್ಲಾ ಮುಖ್ಯ ರಸ್ತೆಯನ್ನು ಅನುದಾನದ ಲಭ್ಯತೆಯ ಅನುಸಾರ ಉಸ್ತುವಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದು

ಚಿಂತಾಮಣಿ ಕ್ಷೇತ್ರದ ನಲ್ಲಗುಟ್ಲಹಳ್ಳಿ ಬಳಿ ಸೇತುವೆ ನಿರ್ಮಾಣ

626 (298) ಶ್ರೀ ಚೌಡರೆಡ್ಡಿ (ಚಿಂತಾಮಣಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೀಳೂರಿನಿಂದ ಬಾಗೇಪಲ್ಲಿಗೆ ಹೋಗುವ ಮುಖ್ಯ ರಸ್ತೆಯ ನಲ್ಲಗುಟ್ಟಹಳ್ಳಿ ಬಳಿ ಸೇತುವೆ ಇಲ್ಲದೆ, ವಾಹನ ಸಂಚಾರಕ್ಕೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸದರಿ ಸ್ಥಳದಲ್ಲಿ ಕಾಸ್‌ವೇ ಉಪಯೋಗಕ್ಕೆ ಬಾರದೇ ಸಾರ್ವಜನಿಕರ ವಾಹನ ಸಂಚಾರಕ್ಕೆ ತೊಂದರೆ ಆಗುತ್ತಿದ್ದರೂ ಸಹ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿರ್ಲಕ್ಷಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?